ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಶುಕ್ರವಾರ, ದಿನಾಂಕ: 25ನೇ ಸೆಪ್ಟಂಬರ್, 2020

ಕನ್ನಡ ರಾಜ್ಯೋತ್ಸವದ ವೈಭವ ಕುರಿತು

ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು):-

737 (663) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯಾದ್ಯಂತ ಕಳೆದ 5 ವರ್ಷಗಳಲ್ಲಿ ಎಷ್ಟು ಸಂಘ ಸಂಸ್ಥೆಗಳಿಗೆ ಕನ್ನಡ ರಾಜ್ಯೋತ್ಸವ ಆಚರಿಸುವ ಸಲುವಾಗಿ ಅನುದಾನ ಬಿಡುಗಡೆ ಮಾಡಲಾಗಿದೆ ; (ಸಂಘ ಸಂಸ್ಥೆಯ ಹೆಸರಿನೊಂದಿಗೆ ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸಂಘ ಸಂಸ್ಥೆಗಳಿಗೆ ಅನುದಾನ ಬಿಡುಗಡೆ ಮಾಡಿದ ಬಳಿಕ ಸರ್ಕಾರವು ನೀಡಿರುವ ಅನುದಾನವನ್ನು ಯಾವ ರೀತಿಯಾಗಿ ವೆಚ್ಚ ಮಾಡಲಾಗಿದೆ ಎಂಬ ಬಗ್ಗೆ ಎಷ್ಟು ಸಂಘ ಸಂಸ್ಥೆಗಳು ಪಾಲನಾ ವರದಿ ನೀಡಿವೆ; (ಪಾಲನಾ ವರದಿ ಸಲ್ಲಿಸದ ಸಂಘ ಸಂಸ್ಥೆಗಳ ವಿವರ ನೀಡುವುದು)

(ಇ) ಕಳೆದ ಎರಡು ವರ್ಷಗಳಲ್ಲಿ ಪಾಲನಾ ವರದಿ ಸಲ್ಲಿಸದಿರುವ ಎಷ್ಟು ಸಂಘ ಸಂಸ್ಥೆಗಳಿಗೆ ಅನುದಾನ ಬಿಡುಗಡೆ ಮಾಡಲಾಗಿದೆ; ಪಾಲನಾ ವರದಿ ಸಲ್ಲಿಸದಿರುವ ಸಂಘ ಸಂಸ್ಥೆಗಳಿಗೆ ನೀಡಿರುವ ಅನುದಾನ ಹಿಂಪಡೆಯಲು ಕೈಗೊಂಡ ಕ್ರಮಗಳೇನು ?